G2

ಆಯುಕ್ತರು
ಕಾರ್ಮಿಕ ಆಯುಕ್ತರವರ ಕಛೇರಿ

ಕರ್ನಾಟಕ ಸರ್ಕಾರ
ಕಾರ್ಮಿಕ ಇಲಾಖೆ

"ಕಾರ್ಮಿಕ ಭವನ", ಐಟಿಐ ಕಾಲೇಜ್ ಕಾಂಪೌಂಡ್,
ಬನ್ನೇರುಘಟ್ಟ ರಸ್ತೆ, ಬೆಂಗಳೂರು – 560029
ಕಛೇರಿ: 080–29753078
ಇ.ಮೇಲ್: labour.commissioner42@gmail.com

ಸಂಖ್ಯೆ: ಕವೇಕಾ–2/ಪರಿಷ್ಕರಣೆ/ಸಿಆರ್–04/21–22

ದಿನಾಂಕ: 05–10–2023

## : ಕಛೇರಿ ಆದೇಶ :

ವಿಷಯ: ***"ಅಗರಬತ್ತಿ ತಯಾರಿಕೆ"*** ಉದ್ದಿಮೆಗೆ ಕನಿಷ್ಠ ವೇತನ ದರಗಳನ್ನು ಪರಿಷ್ಕರಿಸಿ, ಸರ್ಕಾರವು ಹೊರಡಿಸಿರುವ ಅಂತಿಮ ಅಧಿಸೂಚನೆಯ ಕುರಿತು ಪ್ರಚಾರ ಕೈಗೊಳ್ಳುವ ಬಗ್ಗೆ.

ಉಲ್ಲೇಖ: ಸರ್ಕಾರದ ಅಧಿಸೂಚನೆ ಸಂಖ್ಯೆ: ಕಾಇ 107 ಎಲ್‌ಡಬ್ಲ್ಯೂಎ 2021, ದಿನಾಂಕ: 15–09–2023.

******

ಮೇಲ್ಕಂಡ ವಿಷಯ ಹಾಗೂ ಉಲ್ಲೇಖಕ್ಕೆ ಸಂಬಂಧಿಸಿದಂತೆ, ***"ಅಗರಬತ್ತಿ ತಯಾರಿಕೆ ಮತ್ತು ಸಾಂಬ್ರಾಣಿ (ಇನ್‌ಸೆನ್ಸ್) ಉತ್ಪನ್ನಗಳ ತಯಾರಿಕೆಯಲ್ಲಿ ಉದ್ಯೋಗ"*** ಅನುಸೂಚಿತ ಉದ್ದಿಮೆಗೆ ಸರ್ಕಾರವು ಕನಿಷ್ಠ ವೇತನ ದರಗಳನ್ನು ಪರಿಷ್ಕರಿಸಿ, ದಿನಾಂಕ: 15–09–2023 ರಂದು ಅಧಿಸೂಚನೆಯನ್ನು ಹೊರಡಿಸಿರುತ್ತದೆ. ಸದರಿ ಅಧಿಸೂಚನೆಯನ್ನು ಈ ಪತ್ರದೊಂದಿಗೆ ಲಗತ್ತಿಸಿ ಕಳುಹಿಸಲಾಗಿರುತ್ತದೆ. ಈ ಅಧಿಸೂಚನೆಯ ಕುರಿತು ಕೆಳಗೆ ಸೂಚಿಸಿದಂತೆ ಸಾರ್ವಜನಿಕರ ಗಮನಕ್ಕೆ ತರಲು ಸೂಕ್ತ ಕ್ರಮ ಕೈಗೊಳ್ಳಲು ತಿಳಿಸಿದೆ.

1. ಅಧಿಸೂಚನೆಗಳನ್ನು ತಹಸೀಲ್ದಾರರು, ಉಪವಿಭಾಗಾಧಿಕಾರಿಗಳು, ಜಿಲ್ಲಾಧಿಕಾರಿಗಳು, ತಾಲ್ಲೂಕು ಪಂಚಾಯತಿ ಹಾಗೂ ಜಿಲ್ಲಾ ಪಂಚಾಯತ್ ಕಾರ್ಯ ನಿರ್ವಹಣಾಧಿಕಾರಿಗಳ ಕಛೇರಿಗಳು ಹಾಗೂ ಇತರೆ ಸರ್ಕಾರಿ ಕಛೇರಿಗಳಲ್ಲಿ ಪ್ರದರ್ಶಿಸುವ ಮೂಲಕ ಸಾರ್ವಜನಿಕರ ಗಮನಕ್ಕೆ ತರಲು ಕ್ರಮ ಕೈಗೊಳ್ಳುವುದು.
2. ಅಧಿಸೂಚನೆಗಳನ್ನು ನಿಮ್ಮ ಹಾಗೂ ನಿಮ್ಮ ಅಧೀನದ ಎಲ್ಲಾ ಕಛೇರಿಗಳ ಸೂಚನಾ ಫಲಕಗಳಲ್ಲಿ ಪ್ರದರ್ಶಿಸುವುದು.

Gopalk

(ಡಾ॥ ಹೆಚ್.ಎನ್ ಗೋಪಾಲಕೃಷ್ಣ ಭಾ.ಆ.ಸೇ)
ಆಯುಕ್ತರು
ಕಾರ್ಮಿಕ ಇಲಾಖೆ

**ಇವರಿಗೆ:**

1. ಎಲ್ಲಾ ಕಾರ್ಮಿಕ ಅಧಿಕಾರಿಗಳು– ತಮ್ಮ ಕಾರ್ಯವ್ಯಾಪ್ತಿಯಲ್ಲಿ ಬರುವ ಹಿರಿಯ ಕಾರ್ಮಿಕ ನಿರೀಕ್ಷಕರು ಹಾಗೂ ಕಾರ್ಮಿಕ ನಿರೀಕ್ಷಕರುಗಳಿಗೆ ಪ್ರತಿಗಳನ್ನು ತಲುಪಿಸಿ ಸೂಕ್ತ ಕ್ರಮ ಕೈಗೊಳ್ಳಲು ಸೂಚಿಸುವುದು.
2. ಎಲ್ಲಾ ಸಹಾಯಕ ಕಾರ್ಮಿಕ ಆಯುಕ್ತರು.
3. ಎಲ್ಲಾ ಉಪ ಕಾರ್ಮಿಕ ಆಯುಕ್ತರು– ಮೇಲ್ವಿಚಾರಣಾ ಕ್ರಮವಹಿಸುವುದು.
4. ಉಪ ಕಾರ್ಮಿಕ ಆಯುಕ್ತರು (ಪ್ರಚಾರ ಮತ್ತು ಅಂಕಿ ಅಂಶ), ಬೆಂಗಳೂರು – ಇಲಾಖೆಯ ಅಧಿಕೃತ ಜಾಲತಾಣದಲ್ಲಿ ಪ್ರಕಟಿಸಲು ಕ್ರಮವಹಿಸುವುದು.
5. ಜಂಟಿ ಕಾರ್ಮಿಕ ಆಯುಕ್ತರು (ಕನಿಷ್ಠ ವೇತನ), ಬೆಂಗಳೂರು
6. ಅಪರ ಕಾರ್ಮಿಕ ಆಯುಕ್ತರು (ಆಡಳಿತ), ಬೆಂಗಳೂರು
7. ಅಪರ ಕಾರ್ಮಿಕ ಆಯುಕ್ತರು (ಕೈಗಾರಿಕಾ ಬಾಂಧವ್ಯ), ಬೆಂಗಳೂರು

} ಮಾಹಿತಿಗಾಗಿ

C:\Users\USER\Desktop\Intimation Office Order.docx

# ಕರ್ನಾಟಕ ಸರ್ಕಾರ

ಸಂಖ್ಯೆ: ಕಾಇ 107 ಎಲ್ ಡಬ್ಲ್ಯೂಎ 2021

ಕರ್ನಾಟಕ ಸರ್ಕಾರದ ಸಚಿವಾಲಯ,
ವಿಕಾಸಸೌಧ,
ಬೆಂಗಳೂರು, ದಿನಾಂಕ: 15.09.2023

## ಅಧಿಸೂಚನೆ

ಕರ್ನಾಟಕ ರಾಜ್ಯದಾದ್ಯಂತ "ಅಗರಬತ್ತಿ ತಯಾರಿಕೆ ಮತ್ತು ಸಾಂಬ್ರಾಣಿ (ಇನ್‌ಸೆನ್ಸ್) ಉತ್ಪನ್ನಗಳ ತಯಾರಿಕೆಯಲ್ಲಿ ಉದ್ಯೋಗ" ಅನುಸೂಚಿತ ಉದ್ದಿಮೆಯಲ್ಲಿ ಯಾವುದೇ ಕೆಲಸದಲ್ಲಿ ತೊಡಗಿರುವ ಕಾರ್ಮಿಕರಿಗೆ ಈ ಕೆಳಕಂಡ "ಕನಿಷ್ಠ ವೇತನ ದರಗಳ ಕೋಷ್ಟಕ" ದಲ್ಲಿ ನಿರ್ಧಿಷ್ಟಪಡಿಸಿರುವಂತೆ ಕನಿಷ್ಠ ವೇತನ ದರಗಳನ್ನು ಪರಿಷ್ಕರಿಸಲು ರಾಜ್ಯ ಸರ್ಕಾರವು ತೀರ್ಮಾನಿಸಿದೆ. ಕನಿಷ್ಠ ವೇತನ ಕಾಯ್ದೆ 1948 (ಕೇಂದ್ರ ಕಾಯ್ದೆ ಸಂಖ್ಯೆ: XI) ರ ಕಲಂ 3(1)(ಬಿ) ಸಹವಾಚಿತ 5(1)(ಎ) ರಡಿಯಲ್ಲಿ ರಾಜ್ಯ ಸರ್ಕಾರಕ್ಕೆ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ, ಈ ಅಧಿಸೂಚನೆಯನ್ನು ಪ್ರಕಟಿಸಲಾಗಿದೆ.

ಸರ್ಕಾರದ ಆದೇಶ ಸಂಖ್ಯೆ: ಕಾಇ 107 ಎಲ್‌ಡಬ್ಲ್ಯೂಎ 2021 ದಿನಾಂಕ: 01.04.2022 ರಲ್ಲಿ ಕನಿಷ್ಠ ವೇತನ ಕಾಯ್ದೆ, 1948 ರ ಕಲಂ 5(1)(ಎ) ಸಹವಾಚಿತ ಕಲಂ 9 ರನ್ವಯ ಉಪಸಮಿತಿಯನ್ನು ರಚಿಸಲಾಗಿರುತ್ತದೆ. ಸದರಿ ಉಪ ಸಮಿತಿಯು ದಿನಾಂಕ: 07.06.2022, ದಿನಾಂಕ: 27.04-2023, ಮತ್ತು ದಿನಾಂಕ: 05.05.2023 ಗಳಂದು ಸಭೆಗಳನ್ನು ನಡೆಸಲಾಗಿದ್ದು, ದಿನಾಂಕ: 01.02.2023 ರಂದು ಕೈಗೊಳ್ಳಲಾಗಿದ್ದ ಕ್ಷೇತ್ರ ಭೇಟಿಯ ವರದಿಯಲ್ಲಿನ ಅಂಶಗಳನ್ನು ಸದರಿ ಸಭೆಗಳಲ್ಲಿ ಚರ್ಚಿಸಿ, ಈ ಉದ್ದಿಮೆಗೆ ಪರಿಷ್ಕರಿಸಬೇಕಿರುವ ಕನಿಷ್ಠ ವೇತನದ ದರಗಳ ಬಗ್ಗೆ, ಉಪ ಸಮಿತಿಯು ತನ್ನ ಚರ್ಚೆಗಳು, ಸಲಹೆಗಳು ಹಾಗೂ ಅಂತಿಮ ನಡವಳಿಗಳುಳ್ಳ ವರದಿಯನ್ನು ರಾಜ್ಯ ಸರ್ಕಾರಕ್ಕೆ ಸಲ್ಲಿಸಿರುತ್ತದೆ.

"ಅಗರಬತ್ತಿ ತಯಾರಿಕೆ ಮತ್ತು ಸಾಂಬ್ರಾಣಿ (ಇನ್‌ಸೆನ್ಸ್) ಉತ್ಪನ್ನಗಳ ತಯಾರಿಕೆಯಲ್ಲಿ ಉದ್ಯೋಗ" ಅನುಸೂಚಿತ ಉದ್ದಿಮೆಗೆ ಸಂಬಂಧಿಸಿದಂತೆ ರಾಜ್ಯ ಸರ್ಕಾರವು ರಚಿಸಿದ್ದ ಉಪ ಸಮಿತಿಯು ನೀಡಿರುವ ಸಲಹೆಗಳನ್ನು ಹಾಗೂ ಸಂಬಂಧಿಸಿದ ಇತರೆ ಅಂಶಗಳನ್ನು ಪರಿಗಣನೆಗೆ ತೆಗೆದುಕೊಂಡಿರುವ ರಾಜ್ಯ ಸರ್ಕಾರವು, ಕನಿಷ್ಠ ವೇತನ ಕಾಯ್ದೆ, 1948ರ ಕಲಂ 3(1)(ಬಿ) ಸಹವಾಚಿತ ಕಲಂ 5 (1)(ಎ) ರ ಮೂಲಕ ಪ್ರದತ್ತವಾದ ಅಧಿಕಾರವನ್ನು ಚಲಾಯಿಸುತ್ತಾ, ತತ್ಸಂಬಂಧದ ಈ ಹಿಂದಿನ ಎಲ್ಲಾ ಅಧಿಸೂಚನೆಗಳನ್ನು ರದ್ದುಪಡಿಸಿ, ಕರ್ನಾಟಕ ರಾಜ್ಯದಾದ್ಯಂತ "ಅಗರಬತ್ತಿ ತಯಾರಿಕೆ ಮತ್ತು ಸಾಂಬ್ರಾಣಿ (ಇನ್‌ಸೆನ್ಸ್) ಉತ್ಪನ್ನಗಳ ತಯಾರಿಕೆಯಲ್ಲಿ ಉದ್ಯೋಗ" ಅನುಸೂಚಿತ ಉದ್ದಿಮೆಯ ವ್ಯಾಪ್ತಿಗೆ ಒಳಪಡುವ ಸಂಸ್ಥೆಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಕಾರ್ಮಿಕರಿಗೆ ಈ ಅಧಿಸೂಚನೆ ಹೊರಡಿಸಿದ ದಿನಾಂಕದಿಂದ ಅನ್ವಯವಾಗುವಂತೆ ಈ ಕೆಳಕಂಡ ಕನಿಷ್ಠ ವೇತನ ದರಗಳ ಕೋಷ್ಟಕದಲ್ಲಿರುವಂತೆ, ಕನಿಷ್ಠ ವೇತನ ದರಗಳನ್ನು ಈ ಅಧಿಸೂಚನೆಯ ಮೂಲಕ ಪರಿಷ್ಕರಿಸಲಾಗಿರುತ್ತದೆ. ಈ ಪರಿಷ್ಕೃತ ಕನಿಷ್ಠ ವೇತನ ದರಗಳನ್ನು ಪಾವತಿಸಲು, ಕನಿಷ್ಠ ವೇತನ ಕಾಯ್ದೆ-1948ರ ಕಲಂ 12 ರನ್ವಯ ಸಂಬಂಧಿಸಿದ ಎಲ್ಲಾ ಉದ್ಯೋಗದಾತರು ಬಾಧ್ಯಸ್ಥರಾಗಿರುತ್ತಾರೆ.

## ಅಗರಬತ್ತಿ ತಯಾರಿಕೆ ಮತ್ತು ಸಾಂಬ್ರಾಣಿ (ಇನ್‌ಸೆನ್ಸ್) ಉತ್ಪನ್ನಗಳ ತಯಾರಿಕೆಯಲ್ಲಿ ಉದ್ಯೋಗ ಅನುಸೂಚಿತ ಉದ್ದಿಮೆಯ ಕನಿಷ್ಠ ವೇತನ ದರಗಳ ಕೋಷ್ಟಕ

| ಕ್ರ. ಸಂ. | ಕೆಲಸದ ಪ್ರವರ್ಗಗಳು | ಕನಿಷ್ಠ ವೇತನ ದರಗಳು |
|---|---|---|
| 1. | | ಮಾಸಿಕ ವೇತನ ದರಗಳು |
| ಎ | ಸೂಪರ್‌ವೈಸರ್ | ರೂ. 13,245.76 |
| ಬಿ | ಲ್ಯಾಬ್ ಟೆಕ್ನಿಷಿಯನ್ | ರೂ. 12,915.76 |
| ಸಿ | ಲ್ಯಾಬ್ ಅಸಿಸ್ಟೆಂಟ್ | ರೂ. 12,695.76 |

| | | |
|---|---|---|
| ಅಗರಬತ್ತಿ ತಿರುಪುವವರು | | |
| | ಕೆಲಸದ ಸ್ವರೂಪ | 1000 ಬತ್ತಿಗಳಿಗೆ ನಿಗದಿಪಡಿಸಿರುವ ಕನಿಷ್ಠ ವೇತನ ದರಗಳು |
| ಎ | 9" ಕ್ಕಿಂತ ಕಡಿಮೆ ಗಾತ್ರದ ತಿರುಪಿದ ಬತ್ತಿಗಳು, 9" ವರೆಗಿನ ಫ್ಲೋರಾ (ದರ್ಬಾರ್) ತಿರುಪಿದ ಬತ್ತಿಗಳು (ತೆಳು, ಸಾಧಾರಣ, ದಪ್ಪ) | ರೂ. 75.15 |
| ಬಿ | 10" ಕ್ಕಿಂತಲೂ ಹೆಚ್ಚಿನ ಗಾತ್ರದ ಫ್ಲೋರಾ (ದರ್ಬಾರ್) ತಿರುಪಿದ ಬತ್ತಿಗಳು (ತೆಳು, ಸಾಧಾರಣ, ದಪ್ಪ) | ರೂ. 87.12 |
| 3 | ಅಗರಬತ್ತಿ ಪ್ಯಾಕ್ ಮಾಡುವವರು | |
| ಎ | ಪ್ಯಾಕೆಟ್ಸ್ | 12 ಪೊಟ್ಟಣಗಳ ಗುಚ್ಚಕ್ಕೆ ನಿಗದಿಪಡಿಸಿರುವ ಕನಿಷ್ಠ ವೇತನ ದರಗಳು |
| ಎ | 15 ಗ್ರಾಂ ಗಿಂತಲೂ ಕಡಿಮೆ ತೂಕದ ಪ್ಯಾಕ್‌ಗಳು | ರೂ. 2.31 |
| ಬಿ | 15 ಗ್ರಾಂನಿಂದ 50 ಗ್ರಾಂವರೆಗಿನ ಪ್ಯಾಕ್‌ಗಳು | ರೂ. 2.44 |
| ಸಿ | 51 ಗ್ರಾಂನಿಂದ 160 ಗ್ರಾಂವರೆಗಿನ ಪ್ಯಾಕ್‌ಗಳು | ರೂ. 2.87 |
| ಡಿ | 160 ಗ್ರಾಂ ಗಿಂತಲೂ ಮೇಲ್ಪಟ್ಟ ಪ್ಯಾಕ್‌ಗಳು | ರೂ. 3.47 |
| ಇ | 2 ಇನ್ 1 ಪ್ಯಾಕ್‌ಗಳು | ರೂ. 2.49 |
| ಎಫ್ | 3 ಇನ್ 1 ಪ್ಯಾಕ್‌ಗಳು | ರೂ. 2.89 |
| ಜಿ | 4 ಇನ್ 1 ಪ್ಯಾಕ್‌ಗಳು | ರೂ. 3.47 |
| ಹೆಚ್ | 5 ಇನ್ 1 ಪ್ಯಾಕ್‌ಗಳು | ರೂ. 4.10 |
| ಐ | 7 ಇನ್ 1 ಪ್ಯಾಕ್‌ಗಳು | ರೂ. 5.06 |
| ಬಿ | ಪೌಚ್‌ಗಳು | |
| 1 | 15 ಗ್ರಾಂನಿಂದ 50 ಗ್ರಾಂವರೆಗಿನ ಪ್ಯಾಕ್‌ಗಳು | ರೂ. 2.31 |
| 2 | 51 ಗ್ರಾಂನಿಂದ 170 ಗ್ರಾಂವರೆಗಿನ ಪ್ಯಾಕ್‌ಗಳು | ರೂ. 2.44 |
| 3 | 171 ಗ್ರಾಂ ಗಿಂತಲೂ ಮೇಲ್ಪಟ್ಟ ಪ್ಯಾಕ್‌ಗಳು | ರೂ. 2.49 |
| ಸಿ | ಹೆಕ್ಸಾ ಪ್ಯಾಕೆಟ್ಸ್ | 12 ಪೊಟ್ಟಣಗಳ ಗುಚ್ಚಕ್ಕೆ ನಿಗದಿಪಡಿಸಿರುವ ಕನಿಷ್ಠ ವೇತನ ದರಗಳು |
| 1 | 15 ಗ್ರಾಂ ಗಿಂತಲೂ ಹೆಚ್ಚಿನ ತೂಕದ ಪ್ಯಾಕ್‌ಗಳು | ರೂ. 3.03 |
| ಡಿ | ಬಂಡಲ್ ಪ್ಯಾಕಿಂಗ್ | ಪ್ರತಿ ಕೆ.ಜಿ.ಗೆ ನಿಗದಿಪಡಿಸಿರುವ ಕನಿಷ್ಠ ವೇತನ ದರಗಳು |
| 1 | 100 ಗ್ರಾಂ ವರೆಗಿನ ಬಂಡಲ್‌ಗಳು | ರೂ. 4.90 |
| 2 | 100 ಗ್ರಾಂ ನಿಂದ 250 ಗ್ರಾಂ ವರೆಗಿನ ಬಂಡಲ್‌ಗಳು | |
| 3 | 250 ಗ್ರಾಂ ಗಿಂತಲೂ ಹೆಚ್ಚಿನ ತೂಕದ ಬಂಡಲ್‌ಗಳು | |
| 4. | ಗ್ರೈಂಡರ್ಸ್, ಮಿಕ್ಸರ್ಸ್, ಕೋಟರ್ಸ್, ಲೋಡರ್ಸ್ ಮತ್ತು ಬತ್ತಿ ಯಂತ್ರದ ಎಲ್ಲಾ ಆಪರೇಟರ್‌ಗಳು, ಕಾರ್ಟನ್ ಪ್ಯಾಕರ್ಸ್, ಫೋರ್ಕ್ ಲಿಫ್ಟ್ ಆಪರೇಟರ್ಸ್, ಮೆಕ್ಯಾನಿಕ್, ಮೆಷಿನ್ ಅಪರೇಟರ್ಸ್, ನಿರ್ವಹಣಾ ತಂತ್ರಜ್ಞರು, ಎಲೆಕ್ಟ್ರಿಷಿಯನ್, ಫಿಟ್ಟರ್ | ಪ್ರತಿ ದಿನಕ್ಕೆ ನಿಗದಿಪಡಿಸಿರುವ ಕನಿಷ್ಠ ವೇತನ ದರಗಳು<br>ರೂ. 473.83 |

| | ಕಛೇರಿ ಸಿಬ್ಬಂದಿ | ನಿಗದಿಪಡಿಸಿರುವ ಮಾಸಿಕ ವೇತನ ದರಗಳು |
|---|---|---|
| 1 | ಮ್ಯಾನೇಜರ್/ ಪರ್ಸನಲ್ ಆಫೀಸರ್ | ರೂ. 13,520.76 |
| 2 | ಅಸಿಸ್ಟೆಂಟ್ ಮ್ಯಾನೇಜರ್/ಅಸಿಸ್ಟೆಂಟ್ ಪರ್ಸನಲ್ ಆಫೀಸರ್ | ರೂ. 13,245.76 |
| 3 | ಅಕೌಂಟೆಂಟ್/ ಕ್ಯಾಷಿಯರ್ /ಸೀನಿಯರ್ ಕ್ಲರ್ಕ್ / ಸ್ಟೋರ್ ಕೀಪರ್ | ರೂ. 12,805.76 |
| 4 | ಶೀಘ್ರಲಿಪಿಗಾರ/ಕಂಪ್ಯೂಟರ್ ಆಪರೇಟರ್/ ಸ್ವಾಗತಕಾರರು | ರೂ. 12,640.76 |
| 5 | ಆಫೀಸ್‌ಬಾಯ್/ಪ್ಯೂನ್/ ವಾಚ್ ಮನ್/ ಅಟೆಂಡರ್/ ಗಾರ್ಡನರ್ /ಸ್ವೀಪರ್ / ಹೌಸ್‌ಕೀಪಿಂಗ್ | ರೂ 11,540.76 |
| | ಚಾಲಕರು | ನಿಗದಿಪಡಿಸಿರುವ ಮಾಸಿಕ ವೇತನ ದರಗಳು |
| 1 | ಲಾರಿ ಚಾಲಕರು | ರೂ. 12,585.76 |
| 2 | ಕಾರು / ಜೀಪ್ / ತ್ರಿಚಕ್ರ ವಾಹನ (ಎಲ್‌ಸಿವಿ) ಚಾಲಕರು | ರೂ. 12,145.76 |
| | | ಪ್ರತಿ ದಿನಕ್ಕೆ ನಿಗದಿಪಡಿಸಿರುವ ಕನಿಷ್ಠ ವೇತನ ದರಗಳು |
| 3 | ಲೋಡರ್ಸ್ ಮತ್ತು ಅನ್‌ಲೋಡರ್ಸ್ | ರೂ. 473.91 |
| 4 | ಜನರಲ್ ವರ್ಕರ್ಸ್ (ಮೇಲೆ ತಿಳಿಸಿರುವ ಯಾವುದೇ ವರ್ಗಕ್ಕೆ ಸೇರದಿರುವವರು) | ರೂ. 457.41 |

ಮೇಲ್ಕಂಡ ಕನಿಷ್ಠ ವೇತನ ದರಗಳನ್ನು ಸರ್ಕಾರವು ಈ ಕೆಳಕಂಡ ಷರತ್ತುಗಳಿಗೊಳಪಟ್ಟು ನಿಗದಿಪಡಿಸಿದ್ದು, ಈ ಎಲ್ಲಾ ಷರತ್ತುಗಳನ್ನು ಯಥಾವತ್ತಾಗಿ ಉದ್ಯೋಗದಾತರು ಪಾಲಿಸಲು ಬಾದ್ಯಸ್ಥರಿರುತ್ತಾರೆ;

1. ವ್ಯತ್ಯಾಸವಾಗುವ ತುಟ್ಟಿಭತ್ಯೆ:-

ತುಟ್ಟಿಭತ್ಯೆ ಲೆಕ್ಕಾಚಾರವನ್ನು ವರ್ಷಕ್ಕೊಮ್ಮೆ ಮಾಡಲಾಗುತ್ತದೆ. ಹಿಂದಿನ ಕ್ಯಾಲೆಂಡರ್ ವರ್ಷದ ಹನ್ನೆರಡು (12) ತಿಂಗಳುಗಳ ಗ್ರಾಹಕ ಬೆಲೆ ಸೂಚ್ಯಾಂಕಗಳ ಸರಾಸರಿ ಆಧಾರದ ಮೇಲೆ ಏಪ್ರಿಲ್ ಮೊದಲನೇ ದಿನಾಂಕದಂದು ಪ್ರತಿ ವರ್ಷ ಲೆಕ್ಕಾಚಾರ ಮಾಡತಕ್ಕದ್ದು. ಅಲ್ಲದೇ ಗ್ರಾಹಕ ಬೆಲೆ ಸೂಚ್ಯಂಕಗಳ ಸಂಖ್ಯೆಯ ವಾರ್ಷಿಕ ಸರಾಸರಿ ಆಧಾರದ ಮೇಲೆ ಹೆಚ್ಚುವರಿಯಾದ ಅಥವಾ ಕಡಿಮೆಯಾದ ಪ್ರಮಾಣವನ್ನು ಆಧರಿಸಿ ಲೆಕ್ಕ ಹಾಕಲಾಗುತ್ತದೆ. ಗ್ರಾಹಕ ಬೆಲೆ ಸೂಚ್ಯಾಂಕ 8398 ಅಂಶಗಳಿಗಿಂತ ಹೆಚ್ಚಾಗುವ ಪ್ರತಿ ಅಂಶಕ್ಕೆ ಎಲ್ಲಾ ವರ್ಗದ ಕಾರ್ಮಿಕರಿಗೆ ದಿನ ಒಂದಕ್ಕೆ ನಾಲ್ಕು (4) ಪೈಸೆಯಂತೆ ತುಟ್ಟಿ ಭತ್ಯೆಯನ್ನು ಪಾವತಿಸತಕ್ಕದ್ದು.

ತುಟ್ಟಿಭತ್ಯೆಯನ್ನು ಲೆಕ್ಕಾಚಾರ ಮಾಡುವ ವಿಧಾನ:-

ಅ) ಮಾಸಿಕ ವೇತನವನ್ನು ಪಡೆಯುವವರು:-

ತಿಂಗಳ ತುಟ್ಟಿಭತ್ಯೆ = ಪ್ರತಿ ವರ್ಷ ಹೆಚ್ಚಾಗುವ ಅಥವಾ ಕಡಿಮೆಯಾಗುವ ಗ್ರಾಹಕ ಬೆಲೆ

ಸೂಚ್ಯಾಂಕದ ಅಂಶಗಳು (ಸಿ.ಪಿ.ಐ) x ತುಟ್ಟಿಭತ್ಯೆಯ ದರ x 30 ದಿನಗಳು

ದಿನಗೂಲಿ ಗಳಿಕೆದಾರರ ಸಂದರ್ಭದಲ್ಲಿ ಮಾಸಿಕ ವೇತನ ದರಗಳನ್ನು ಇಪ್ಪತ್ತಾರು (26) ದಿನಗಳಿಂದ ವಿಭಾಗಿಸಿ, ನಾಲ್ಕು (4) ರಜಾ ದಿನಗಳಿಗೆ ವೇತನವನ್ನು ನೀಡುವುದೂ ಸೇರಿದಂತೆ ಈ ಕೆಳಕಂಡಂತೆ ಲೆಕ್ಕ ಹಾಕತಕ್ಕದ್ದು. ಭಾಗಿಸಿದಾಗ ಬಂದ ದರವು ಭಿನ್ನಾಂಕವಾಗಿದ್ದಲ್ಲಿ ಅದನ್ನು ಸಮೀಪದ ರೂಪಾಯಿಗೆ ಪೂರ್ಣಗೊಳಿಸುವುದು.

ಆ) ದಿನಗೂಲಿ ವೇತನ ಪಡೆಯುವವರು :-

$$\text{ದಿನದ ತುಟ್ಟಿಭತ್ಯೆ} = \frac{\text{ಪ್ರತಿ ವರ್ಷ ಹೆಚ್ಚಾಗುವ ಅಂಶಗಳು} \times \text{ತುಟ್ಟಿಭತ್ಯೆಯ ದರ} \times 30 \text{ ದಿನಗಳು}}{26}$$

2. ಮಹಿಳೆಯರು, ಪುರುಷರು ಮತ್ತು ತೃತೀಯ ಲಿಂಗಿಗಳು ಒಂದೇ ರೀತಿಯ ಕೆಲಸವನ್ನು ನಿರ್ವಹಿಸಿದ ಸಂದರ್ಭಗಳಲ್ಲಿ ಎಲ್ಲರಿಗೂ ಸಮಾನ ದರದ ವೇತನಗಳನ್ನು ಸಂದಾಯ ಮಾಡತಕ್ಕದ್ದು.

3. ಅಧಿಸೂಚನೆಯಲ್ಲಿ ವರ್ಗವನ್ನು ನಮೂದಿಸದೆ ಇರುವ ವರ್ಗಗಳ ಕಾರ್ಮಿಕರಿಗೆ ಅದೇ ಸ್ವರೂಪದ ಕೆಲಸ ನಿರ್ವಹಿಸುತ್ತಿರುವ ಇತರೆ ವರ್ಗದ ಕಾರ್ಮಿಕರಿಗೆ ಪಾವತಿ ಮಾಡುತ್ತಿರುವ ವೇತನವನ್ನು ಸಂದಾಯ ಮಾಡತಕ್ಕದ್ದು.

4. ತುಂಡು ಆಧಾರದ ಮೇಲೆ ಕೆಲಸ ಮಾಡುವ ಕಾರ್ಮಿಕರ 8 ಗಂಟೆಗಳ ಕೆಲಸದ ವೇತನವು ಅದೇ ತರಹದ ಕೆಲಸ ಮಾಡುವ ಕಾರ್ಮಿಕರ ಒಂದು ದಿನದ ವೇತನಕ್ಕಿಂತ ಕಡಿಮೆ ಇರಕೂಡದು. ಒಂದು ದಿನದ ಕೆಲಸ ಎಂದರೆ 8 ಗಂಟೆಗಳ ಕೆಲಸ ಎಂದು ತಿಳಿಯತಕ್ಕದ್ದು. ಕಾರ್ಮಿಕರನ್ನು 8 ಗಂಟೆಗಳಿಗಿಂತ ಕಡಿಮೆ ಅವಧಿಯ ಕೆಲಸಕ್ಕೆ ನೇಮಿಸಿಕೊಂಡರೆ ಅಂತಹ ಕಡಿಮೆ ಅವಧಿಗೆ ಅನುಗುಣವಾಗಿ ವೇತನವನ್ನು ಆ ವರ್ಗದ ದಿನದ ಅಥವಾ ತಿಂಗಳ ವೇತನದ ಆಧಾರದ ಮೇಲೆ ಲೆಕ್ಕ ಹಾಕುವುದು.

5. ದಿನಗೂಲಿ ನೌಕರರಿಗೆ ಅವರ ದಿನದ ವೇತನ ದರಗಳನ್ನು ಕಂಡು ಹಿಡಿಯಬೇಕಾದಲ್ಲಿ ತಿಂಗಳ ವೇತನ ದರವನ್ನು 26 ದಿನಗಳಿಂದ ಭಾಗಿಸಬೇಕು. ಭಾಗಿಸಿದಾಗ ಬಂದ ದರವು ಭಿನ್ನಾಂಕವಾಗಿದ್ದಲ್ಲಿ ಅದನ್ನು ಸಮೀಪದ ರೂಪಾಯಿಗೆ ಪೂರ್ಣಗೊಳಿಸುವುದು.

6. ಸಂಸ್ಥೆಯಲ್ಲಿ ನಿಗದಿಪಡಿಸಿರುವ ವಾರದ ರಜೆ ಅಥವಾ ಹಬ್ಬದ ರಜಾ ದಿನಗಳಲ್ಲಿ ಕೆಲಸ ಮಾಡುವ ಕಾರ್ಮಿಕರಿಗೆ ಕನಿಷ್ಠ ವೇತನ ಕಾಯ್ದೆ ಮತ್ತು ನಿಯಮಗಳಿಗೆ ಒಳಪಟ್ಟು ಸಾಮಾನ್ಯ ವೇತನದ ಎರಡು ಪಟ್ಟು ವೇತನವನ್ನು ಪಾವತಿ ಮಾಡತಕ್ಕದ್ದು.

7. ಕೆಲಸಗಾರರು ದಿನದ ನಿಗದಿತ ಅವಧಿಗಿಂತ ಹೆಚ್ಚು ಸಮಯ ಕೆಲಸ ನಿರ್ವಹಿಸಿದಲ್ಲಿ ಅಂತಹ ಹೆಚ್ಚುವರಿ ಅವಧಿ ಕೆಲಸಕ್ಕೆ ಆತನ ವೇತನದ ಎರಡು ಪಟ್ಟು ವೇತನವನ್ನು ಪಾವತಿಸತಕ್ಕದ್ದು.

8. ವೇತನ ಲೆಕ್ಕಾಚಾರದಲ್ಲಿ ಚಿಲ್ಲರೆ ಬಂದ ಪಕ್ಷದಲ್ಲಿ ಅದನ್ನು ಸಮೀಪದ 50 ಪೈಸೆಗೆ ಪೂರ್ಣಗೊಳಿಸುವುದು.

9. ಟ್ರೈನಿಗಳಿಗೆ ಆ ವರ್ಗದ ನೌಕರರು ಪಡೆಯುತ್ತಿರುವ ವೇತನದ ಪ್ರತಿಶತ 75 ರಷ್ಟು ವೇತನವನ್ನು ಶಿಷ್ಯ ವೇತನವನ್ನಾಗಿ ಪಾವತಿಸತಕ್ಕದ್ದು.

10. ನೌಕರರುಗಳ ವೇತನವನ್ನು ಚೆಕ್ ಮೂಲಕ ಪಾವತಿಸುವುದು ಅಥವಾ ನೌಕರರ ಬ್ಯಾಂಕ್ ಖಾತೆಗೆ ನೇರವಾಗಿ ಜಮೆ ಮಾಡತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

15/9/2023

(ಎ. ಉಮಾದೇವಿ)
ಪೀಠಾಧಿಕಾರಿ-2,
ಕಾರ್ಮಿಕ ಇಲಾಖೆ (ಕನಿಷ್ಠ ವೇತನ)

ಇವರಿಗೆ,
ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ಬೆಂಗಳೂರು ಈ ಅಧಿಸೂಚನೆಯನ್ನು ಇ - ರಾಜ್ಯಪತ್ರದಲ್ಲಿ (E-Gazzette) ಪ್ರಕಟಿಸಲು ಕೋರಲಾಗಿದೆ.

1. ಕಾರ್ಮಿಕ ಆಯುಕ್ತರು, ಕಾರ್ಮಿಕ ಭವನ, ಬನ್ನೇರುಘಟ್ಟರಸ್ತೆ, ಬೆಂಗಳೂರು-29.
2. ರಾಜ್ಯದ ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳಿಗೆ (ಕಾರ್ಮಿಕ ಆಯುಕ್ತರ ಮೂಲಕ).
3. ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತ್ ಗಳ ಮುಖ್ಯ ಕಾರ್ಯ ನಿರ್ವಹಣಾಧಿಕಾರಿಗಳು (ಕಾರ್ಮಿಕ ಆಯುಕ್ತರ ಮೂಲಕ).
4. ನಿರ್ದೇಶಕರು, ವಾರ್ತಾ ಮತ್ತು ಪ್ರಚಾರ ಇಲಾಖೆ, ವಾರ್ತಾ ಭವನ, ಇನ್ ಫೆಂಟ್ರಿ ರಸ್ತೆ, ಬೆಂಗಳೂರು
5. ಸದಸ್ಯ ಕಾರ್ಯದರ್ಶಿ, ಕರ್ನಾಟಕ ಕನಿಷ್ಠ ವೇತನ ಸಲಹಾ ಮಂಡಳಿ, ಕಾರ್ಮಿಕ ಆಯುಕ್ತರ ಕಛೇರಿ, ಕಾರ್ಮಿಕ ಭವನ, ಬೆಂಗಳೂರು.
6. ಎಲ್ಲಾ ಜಿಲ್ಲೆಗಳ ಕಾರ್ಮಿಕ ಅಧಿಕಾರಿಗಳಿಗೆ (ಕಾರ್ಮಿಕ ಆಯುಕ್ತರ ಮೂಲಕ)

7. ಶಾಖಾ ರಕ್ಷ ಕಡತ/ ಹೆಚ್ಚುವರಿ ಪ್ರತಿ.

ಪ್ರತಿಗಳು:

1. ಮಾನ್ಯ ಕಾರ್ಮಿಕ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು
2. ಸರ್ಕಾರದ ಪ್ರಧಾನ ಕಾರ್ಯದರ್ಶಿರವರ ಆಪ್ತ ಕಾರ್ಯದರ್ಶಿ, ಕಾರ್ಮಿಕ ಇಲಾಖೆ
3. ಸರ್ಕಾರದ ಉಪ ಕಾರ್ಯದರ್ಶಿರವರ ಆಪ್ತ ಸಹಾಯಕರು, ಕಾರ್ಮಿಕ ಇಲಾಖೆ